ನಂದಿನಿ

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,
ಮಾಚೇನಹಳ್ಳಿ, ನಿದಿಗೆ(ಅಂಚೆ), ಶಿವಮೊಗ್ಗ–577 222
ದೂರವಾಣಿ: 08182–246161, 246162
E-mail: md_shimul@yahoo.com, shimuladmn@gmail.com Website: www.shimul.coop

ಸಂಖ್ಯೆ: ಶಿಮುಲ್/ಆಡಳಿತ–1/ನೇ.ನೇ–370/ 6198 /2025–26 ದಿನಾಂಕ: 05–02–2026

ಶಿಮುಲ್

## ನೇಮಕಾತಿ ಪ್ರಕಟಣೆಯ ಅರ್ಜಿ ಸಲ್ಲಿಕೆ ಕಾಲಾವಧಿ ವಿಸ್ತರಣೆ

ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., (ಶಿಮುಲ್) ಶಿವಮೊಗ್ಗ ಇದರ ನೇರ ನೇಮಕಾತಿ ಪ್ರಕಟಣೆ ಸಂಖ್ಯೆ.ಶಿಮುಲ್/ಆಡಳಿತ–1/ನೇ.ನೇ–370/4438/2025–26 ದಿನಾಂಕ: 14.11.2025 ರಂತೆ ವಿವಿಧ ವೃಂದಗಳಲ್ಲಿ ಖಾಲಿ ಇರುವ ವಿವಿಧ ವೇತನ ಶ್ರೇಣಿಗಳ 194 ಹುದ್ದೆಗಳಿಗೆ ಆನ್‌ಲೈನ್ ಮುಖಾಂತರ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಸಂಬಂಧಿಸಿದಂತೆ ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ಇವರು ದಿನಾಂಕ: 02.02.2026 ರ ಪತ್ರ ಮುಖೇನ ನೀಡಿರುವ ಸೂಚನೆ ಮತ್ತು ದಿನಾಂಕ: 04.02.2026 ರಂದು ನಡೆದ ಒಕ್ಕೂಟದ ನೇಮಕಾತಿ ಸಮಿತಿ ಸಭೆಯ ತೀರ್ಮಾನದನ್ವಯ ಸದರಿ ನೇಮಕಾತಿ ಪ್ರಕಟಣೆಗೆ ಕಾರಣಾಂತರಗಳಿಂದ ಅರ್ಜಿ ಸಲ್ಲಿಸದಿರುವ ಅಭ್ಯರ್ಥಿಗಳು ಅವಕಾಶ ವಂಚಿತರಾಗಬಾರದೆಂಬ ಸದುದ್ದೇಶದಿಂದ ಹಾಗೂ ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 262 ಸೇನೆನಿ 2025 ಬೆಂಗಳೂರು ದಿನಾಂಕ: 29.01.2026 ರನ್ವಯ ಹೊಸದಾಗಿ ಅರ್ಜಿ ಸಲ್ಲಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಪ್ರಸ್ತುತ ನಿಗದಿಪಡಿಸಿರುವ ಗರಿಷ್ಟ ವಯೋಮಿತಿಯನ್ನು ಒಂದು ಬಾರಿಯ ಕ್ರಮವಾಗಿ **(as a one-time measure)** 05 ವರ್ಷಗಳ ಸಡಿಲಿಕೆ ನೀಡಿ ಒಕ್ಕೂಟದ ನೇರ ನೇಮಕಾತಿ ಪ್ರಕಟಣೆ ಸಂಖ್ಯೆ.ಶಿಮುಲ್/ಆಡಳಿತ–1/ನೇ.ನೇ–370/4438/2025–26 ದಿನಾಂಕ: 14.11.2025 ರಂತೆ ವಿವಿಧ ವೃಂದಗಳಲ್ಲಿ ಖಾಲಿ ಇರುವ ವಿವಿಧ ವೇತನ ಶ್ರೇಣಿಗಳ 194 ಹುದ್ದೆಗಳಿಗೆ ಕಾರಣಾಂತರಗಳಿಂದ ಅರ್ಜಿ ಸಲ್ಲಿಸದೇ ಇರುವ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ದಿನಾಂಕ: 06–02–2026 ರಿಂದ 21–02–2026 ರವರೆಗೆ ಹೊಸದಾಗಿ ಅರ್ಜಿ ಸಲ್ಲಿಸಲು ಇನ್ನೂ 15 ದಿನಗಳ ಕಾಲಾವಕಾಶವನ್ನು ನೀಡಲಾಗಿರುತ್ತದೆ.

ಅದರಂತೆ ದಿನಾಂಕ: 14.11.2025 ರ ನೇಮಕಾತಿ ಪ್ರಕಟಣೆಗೆ ಪ್ರತಿಕ್ರಿಯಿಸಿ ಅರ್ಜಿ ಸಲ್ಲಿಸಿರುವ ಪರಿಶಿಷ್ಟ ಜಾತಿಗೆ ಸೇರಿದ ಅಭ್ಯರ್ಥಿಗಳು ಕಂದಾಯ ಇಲಾಖೆಯಿಂದ ಹೊಸದಾಗಿ ನೀಡಲಾಗುತ್ತಿರುವ ಎಸ್.ಸಿ–ಎ, ಎಸ್.ಸಿ–ಬಿ, ಎಸ್.ಸಿ–ಸಿ ಜಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸದೇ ಹಳೇಯ ಜಾತಿ ಪ್ರಮಾಣ ಪತ್ರಗಳನ್ನು ಅಪ್‌ಲೋಡ್ ಮಾಡಿರುವುದರಿಂದ ಹಾಗೂ ಕೆಲ ಅಭ್ಯರ್ಥಿಗಳ ಅರ್ಜಿಗಳು ಭಾವಚಿತ್ರ ಇಲ್ಲದಿರುವ, ಸಹಿ ಮಾಡದಿರುವ, ಕಂಪ್ಯೂಟರ್ ಪ್ರಮಾಣ ಪತ್ರ, ನಿಗದಿಪಡಿಸಿದ ಅನುಭವ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ವಯೋಮಿತಿಯ ದಾಖಲೆಗಳು, ಅಪೂರ್ಣ ಅಂಕಪಟ್ಟಿಗಳು (ಎಸ್‌ಎಸ್‌ಎಲ್‌ಸಿ, ಪಿಯುಸಿ, ಐ.ಟಿ.ಐ, ಡಿಪ್ಲೋಮಾ, ಪದವಿ ಮತ್ತು ಸ್ನಾತಕೋತ್ತರ ಪದವಿ), ನಿಗದಿಪಡಿಸಿದ ವಿದ್ಯಾರ್ಹತೆಯ ಅಂಕಪಟ್ಟಿ, ಕೋರಿರುವ ಮೀಸಲಾತಿ ಅನುಸಾರ ಅಗತ್ಯ ದಾಖಲೆಗಳು, ನಿಗದಿತ ನಮೂನೆಯಲ್ಲಿ ಮೀಸಲಾತಿ ಪ್ರಮಾಣಪತ್ರ ಅಪ್‌ಲೋಡ್ ಮಾಡದಿರುವ ಮತ್ತು ದಾಖಲೆಗಳನ್ನು ಅಸ್ಪಷ್ಟವಾಗಿ ಅಪ್‌ಲೋಡ್ ಮಾಡಿರುವ ಹಾಗೂ ಇತ್ಯಾದಿ ಕಾರಣಗಳಿಂದಾಗಿ ತಿರಸ್ಕೃತಗೊಂಡಿರುತ್ತವೆ.

. . . 2

Scanned with OKEN Scanner

ಈ ಹಿನ್ನೆಲೆಯಲ್ಲಿ ದಿನಾಂಕ: 14.11.2025 ರ ನೇಮಕಾತಿ ಪ್ರಕಟಣೆಗೆ ಪ್ರತಿಕ್ರಿಯಿಸಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮತ್ತೊಮ್ಮೆ ಅವರು ಸಲ್ಲಿಸಿರುವ ಅರ್ಜಿಗಳನ್ನು ಎಡಿಟ್ ಮಾಡಿಕೊಂಡು ಮರುಪರಿಶೀಲಿಸಿ ಅಗತ್ಯ ದಾಖಲೆಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದಕ್ಕೆ ದಿನಾಂಕ: 06-02-2026 ರಿಂದ 21-02-2026 ರವರೆಗೆ ಅವಕಾಶ ನೀಡಲಾಗಿರುತ್ತದೆ.

ಉಳಿದಂತೆ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ. ಸಿಓ 147 ಸಿಸಿಬಿ 2022 ಬೆಂಗಳೂರು ದಿನಾಂಕ: 12.10.2022 ರಲ್ಲಿ ಅನುಮೋದಿಸಿದಂತೆ ನೇಮಕಾತಿಗೆ ಸಂಬಂಧಿಸಿದ ವಿವರವಾದ ಮಾಹಿತಿಗಳನ್ನು ದಿನಾಂಕ: 14.11.2025 ರ ನೇಮಕಾತಿ ಪ್ರಕಟಣೆಯಲ್ಲಿ ಹೊರಡಿಸಿರುವ ಹುದ್ದೆಗಳ ಸಂಖ್ಯೆ, ಮೀಸಲಾತಿ ವರ್ಗೀಕರಣ, ಒಳ ಮೀಸಲಾತಿ, ವಿದ್ಯಾರ್ಹತೆ ಮತ್ತು ಅನುಭವ, ವಯೋಮಿತಿ, ಅರ್ಜಿ ಶುಲ್ಕ, ಆಯ್ಕೆ ವಿಧಾನ, ಅರ್ಜಿ ನಮೂನೆ, ಸಲ್ಲಿಸಬೇಕಾದ ದಾಖಲೆಗಳು ಮತ್ತು ಅರ್ಜಿ ಸಲ್ಲಿಸುವ ವಿಧಾನ ಇತ್ಯಾದಿ ಹೆಚ್ಚಿನ ಎಲ್ಲಾ ವಿವರಗಳನ್ನು ಒಕ್ಕೂಟದ ಅಧಿಕೃತ ವೆಬ್‌ಸೈಟ್ www.shimul.coop ರಲ್ಲಿ ನೀಡಲಾಗಿದೆ. ಆಸಕ್ತಿಯುಳ್ಳ ಅಭ್ಯರ್ಥಿಗಳು ಒಕ್ಕೂಟದ ವೆಬ್‌ಸೈಟ್‌ಗೆ ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸತಕ್ಕದ್ದು ಹಾಗೂ ನಿಗದಿತ ಅರ್ಜಿ ಶುಲ್ಕವನ್ನು ಆನ್‌ಲೈನ್ ಮುಖಾಂತರವೇ ಪಾವತಿಸತಕ್ಕದ್ದು. ಸದರಿ ನೇಮಕಾತಿಗಾಗಿ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ಖುದ್ದಾಗಿ/ಅಂಚೆ/ಕೋರಿಯರ್ ಮೂಲಕ ಸಲ್ಲಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಿದೆ.

ವ್ಯವಸ್ಥಾಪಕ ನಿರ್ದೇಶಕರು

Scanned with OKEN Scanner